157ಲಿಬಿ = (87)
4RK
060226

# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಮೇಶ್ ಬಾಬು ಇವರು ನಿಯಮ -330ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ

* * * *

**ವಿಷಯ:**

ರಾಜ್ಯ ಸರ್ಕಾರದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಡಿಯಲ್ಲಿ ಬರುವ ವಿದ್ಯಾರ್ಥಿ ನಿಲಯ, ವಸತಿ ನಿಲಯ ಮತ್ತು ಆಶ್ರಮ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಆಹಾರ ಪೂರೈಕೆ ಮಾಡಲು ಹಲವಾರು ಮಾನದಂಡಗಳನ್ನು ನಿಗದಿಪಡಿಸಿ ತಾಲ್ಲೂಕು ವ್ಯಾಪ್ತಿಯಲ್ಲಿ ಇವುಗಳಿಗೆ ಅಗತ್ಯವಿರುವ ಆಹಾರ ಧಾನ್ಯಗಳನ್ನು ಖರೀದಿ ಮಾಡಲಾಗುತ್ತಿತ್ತು. ಪ್ರತಿ ವಿದ್ಯಾರ್ಥಿಗೆ 15-06-2024ರಲ್ಲಿ ಪರಿಷ್ಕರಿಸಿದ ಭೋಜನಾ ವೆಚ್ಚದಂತೆ ರೂ.1,750/-, 1,850/-, 1,450/-ಮಾಸಿಕ ಭೋಜನಾ ವೆಚ್ಚ ಲೆಕ್ಕಶೀರ್ಷಿಕೆ:2225-00-103 0-26-090 ಮತ್ತು 2225-03-227-2-62-059 ಅಡಿಯಲ್ಲಿ ಭರಿಸಲಾಗುತ್ತಿತ್ತು. ಸಾಮಾನ್ಯವಾಗಿ ಜೂನ್ 1 ರಂದು ವಸತಿ ನಿಲಯಗಳು ಪ್ರಾರಂಭವಾಗುವುದರಿಂದ ಮೇಲ್ವಿಚಾರಕರು / ವಾರ್ಡನ್‌ರವರು ಆಹಾರ ಸಾಮಾಗ್ರಿಗಳನ್ನು ಖರೀದಿಸುವ ಮುಂಚಿತವಾಗಿ ಕೋಟೇಶನ್ / ಟೆಂಡರ್ ಮೂಲಕ ಸರಬರಾಜು ಪಡೆಯಲಾಗುತ್ತಿತ್ತು. ಆದರೆ 22-01-2024ರ ಆದೇಶದ ಮೂಲಕ ಆಹಾರ ಸರಬರಾಜು ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಎರಡು ವರ್ಷಗಳ ಅವಧಿಗೆ ನಾಲ್ಕು ಸಂಸ್ಥೆಗಳಿಗೆ ರಾಜ್ಯಮಟ್ಟದ ಟೆಂಡರ್‌ಗೆ ಅವಕಾಶ ನೀಡುವ ಮೂಲಕ ವಿದ್ಯಾರ್ಥಿಗಳಿಗೆ ನಿಗದಿತ ಸಮಯದಲ್ಲಿ ಮತ್ತು ಉತ್ತಮ ಆಹಾರ ದೊರಕಿಸುವಲ್ಲಿ ಲೋಪ ಎಸಗಲಾಗಿರುತ್ತದೆ. ಟೆಂಡರ್ ಪಡೆದಿರುವ ಸಂಸ್ಥೆಗಳು ರಾಜ್ಯ ಮಟ್ಟದಿಂದ ತಾಲ್ಲೂಕು ಕೇಂದ್ರದವರೆಗೆ ಆಹಾರ ಸಾಮಾಗ್ರಿಗಳನ್ನು ಪೂರೈಸಲು ಉಪ ಗುತ್ತಿಗೆಗಳನ್ನು ನೀಡಿ ಅವ್ಯವಹಾರಗಳಿಗೆ ಅವಕಾಶ ನೀಡಿರುತ್ತಾರೆ. ಇದರಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್‌ನಲ್ಲಿ ಇರುವ ವಿದ್ಯಾರ್ಥಿಗಳಿಗೆ ಕಳಪೆ ಆಹಾರ ಪೂರೈಕೆ ಆಗುವುದರ ಜೊತೆಗೆ ನಿಗದಿತ ಸಮಯದಲ್ಲಿ ಊಟೋಪಚಾರ ದೊರಕುತ್ತಿಲ್ಲ. ರಾಜ್ಯದ ಹಾಸ್ಟೆಲ್ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ 21-02-2024ರ ಆದೇಶವನ್ನು ಹಿಂದಕ್ಕೆ ಪಡೆದು ಹಳೆಯ ಪದ್ಧತಿಯನ್ನು ಜಾರಿಗೊಳಿಸುವಂತೆ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಉತ್ತರ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಹಾಗೂ ಆಶ್ರಮ ಶಾಲೆಗಳಿಗೆ ಆಹಾರ ಪದಾರ್ಥಗಳು ಮತ್ತು ಇತರೆ ಸಾಮಗ್ರಿಗಳನ್ನು ಸರಬರಾಜು ಮಾಡಲು ವಿದ್ಯಾರ್ಥಿನಿಲಯಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 586 ಬಿಎಂಎಸ್ 2018, ದಿನಾಂಕ:07-04-2018ರ ಆದೇಶದಂತೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದಲ್ಲಿ ಟೆಂಡರ್ ಆಹ್ವಾನಿಸಿ ವಿದ್ಯಾರ್ಥಿ ನಿಲಯಗಳಿಗೆ ಬೇಕಾಗುವ ಆಹಾರ ಪದಾರ್ಥಗಳ ಪ್ರಮಾಣವನ್ನು ಐಟಂವಾರು ಲೆಕ್ಕಹಾಕಿ, ತಾಲ್ಲೂಕುಗಳನ್ನು ಘಟಕಗಳನ್ನಾಗಿ ವಿಂಗಡಿಸಿ ಟೆಂಡರ್ ಆಹ್ವಾನಿಸಲಾಗುತ್ತಿತ್ತು. ಈ ಪ್ರಕ್ರಿಯೆಯಲ್ಲಿ ಆಹಾರ ಪದಾರ್ಥಗಳನ್ನು ಐಟಂವಾರು ಲೆಕ್ಕಹಾಕಿ ತಾಲ್ಲೂಕುಗಳನ್ನು ಘಟಕಗಳನ್ನಾಗಿ ವಿಂಗಡಿಸಿ ಟೆಂಡರ್ ಆಹ್ವಾನಿಸುವುದರಿಂದ ಒಂದು ತಾಲ್ಲೂಕುನಿಂದ ಇನ್ನೊಂದು ತಾಲ್ಲೂಕಿಗೆ ನಮೂದಿಸಿರುವ ದರದಲ್ಲಿ ವಿಭಿನ್ನತೆಯಿದ್ದು ಹಾಗೂ ಟೆಂಡರ್ ಪ್ರಕ್ರಿಯೆಯಲ್ಲಿ ವಿಳಂಭವಾಗುತ್ತಿರುತ್ತದೆ. ಈ ಹಿನ್ನಲೆಯಲ್ಲಿ, ವಿದ್ಯಾರ್ಥಿ ನಿಲಯಗಳಿಗೆ ಹಾಗೂ ಆಶ್ರಮ ಶಾಲೆಗಳಿಗೆ ಆಹಾರ ಸಾಮಗ್ರಿಗಳ ಸುಗಮ ಸರಬರಾಜು ಮಾಡಲು ಹಾಗೂ ಟೆಂಡರ್ ಪ್ರಕ್ರಿಯೆಯನ್ನು ಸರಳಿಕರಣಗೊಳಿಸಲು ಆದೇಶ ಸಂಖ್ಯೆ:ಹಿಂವಕ 499 ಬಿಎಂಎಸ್ 2023, ದಿನಾಂಕ: 01-07-2024ರ ಪರಿಷ್ಕೃತ ಆದೇಶದಂತೆ ಜಿಲ್ಲಾ ಮಟ್ಟದಲ್ಲಿ ಜಿಲ್ಲೆಯನ್ನು ಘಟಕಗಳನ್ನಾಗಿ ವಿಂಗಡಿಸಿ 02 ವರ್ಷದ ಅವಧಿಗೆ ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳು ಹಾಗೂ ಇತರೆ ಸಾಮಗ್ರಿಗಳನ್ನು ವಿದ್ಯಾರ್ಥಿ ನಿಲಯಗಳಿಗೆ ಸರಬರಾಜು ನೀಡಲು ಟೆಂಡರ್ ಆಹ್ವಾನಿಸಿ ಅರ್ಹ ಬಿಡದಾರರಿಗೆ ಟೆಂಡರ್ ಕಾರ್ಯಾದೇಶವನ್ನು ನೀಡಲಾಗಿರುತ್ತದೆ.

..2..

ವಿದ್ಯಾರ್ಥಿ ನಿಲಯಗಳಿಗೆ ಸರಬರಾಜಾಗಿರುವ ಆಹಾರ ಸಾಮಗ್ರಿಗಳ ಗುಣಮಟ್ಟವನ್ನು ಪರಿಶೀಲಿಸಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಹಾರ ಸಾಮಗ್ರಿಗಳ ಗುಣಮಟ್ಟ ಪರಿಶೀಲನಾ ಸಮಿತಿಯನ್ನು ರಚಿಸಲಾಗಿದ್ದು, ಆಹಾರ ಸಾಮಗ್ರಿಗಳನ್ನು ನಿಗದಿತ ಸಮಯದಲ್ಲಿ ಸರಬರಾಜು ಪಡೆಯಲಾಗುತ್ತಿರುತ್ತದೆ. ಪರಿಷ್ಕೃತ ಭೋಜನಾ ವೆಚ್ಚದ ದರದಂತೆ ವಲಯವಾರು ಮೆನುಚಾರ್ಟ್ ಅನ್ನು ಸಿದ್ದಪಡಿಸಲಾಗಿದ್ದು, ಅದರಂತೆ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳನ್ನು ನೀಡಲಾಗುತ್ತಿದೆ.

ಸಂಖ್ಯೆ: ಹಿಂವಕ 1272 ಬಿಎಂಎಸ್ 2025

(ಶಿವರಾಜ.ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.